ಆ) ಹೌದು.

ಕಲಬುರ್ಗಿ ಮತ್ತು ಬೆಂಗಳೂರಿನಲ್ಲಿರುವ ಇಎಸ್‌ಐಸಿ ವೈದ್ಯಕೀಯ ಮಹಾವಿದ್ಯಾಲಯಗಳನ್ನು ರಾಜ್ಯ ಸರ್ಕಾರದ ವಶಕ್ಕೆ ಪಡೆಯುವ ಬಗ್ಗೆ ತಾತ್ವಿಕ ಸಹಮತಿ ನೀಡಲು ಕೇಂದ್ರ ಸರ್ಕಾರವು ರಾಜ್ಯ ಸರ್ಕಾರದ ಪ್ರತಿಕ್ರಿಯೆಯನ್ನು ಕೋರಿರುತ್ತದೆ.

ಇ) ಈ ವೈದ್ಯಕೀಯ ಮಹಾವಿದ್ಯಾಲಯಗಳನ್ನು ರಾಜ್ಯ ಸರ್ಕಾರದ ವಶಕ್ಕೆ ಪಡೆಯುವ ಸಂಬಂಧ ಅನುಸರಿಸಬೇಕಾದ ಮಾರ್ಗಸೂಚಿಗಳು ಹಾಗೂ ಷರತ್ತು ಮತ್ತು ನಿಬಂಧನೆಗಳ ಕುರಿತು ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಡುವೆ ಚರ್ಚೆಯ ಹಂತದಲ್ಲಿರುವುದರಿಂದ ಈ ಬಗ್ಗೆ ಇನ್ನೂ ಅಂತಿಮ ನಿರ್ಣಯ ಕೈಗೊಳ್ಳಲಾಗಿರುವುದಿಲ್ಲ.

ಮಂಡ್ಯ ಜಿಲ್ಲೆಯಲ್ಲಿ ನಾಯಿ ಕಡಿತಕ್ಕೆ ಒಳಗಾದವರು

2659 (3215); ಶ್ರೀ ಎನ್. ಚೆಲುವರಾಯಸ್ವಾಮಿ (ನಾಗಮಂಗಲ)

ಅ) ಮಂಡ್ಯ ಜಿಲ್ಲೆಯಲ್ಲಿ 2014 ಜನವರಿಯಿಂದ ಡಿಸೆಂಬರ್‌ವರೆಗೆ, 2015 ಜನವರಿ ತಿಂಗಳಲ್ಲಿ ಬೀದಿ ನಾಯಿಗಳ ಕಡಿತಕ್ಕೆ ಒಳಗಾದವರ ಸಂಖ್ಯೆ ಎಷ್ಟು; ನಾಯಿ ಕಡಿತದಿಂದ ಯಾರಾದರೂ ಮರಣ ಹೊಂದಿರುತ್ತಾರೆಯೇ (ಪುರುಷರು, ಸ್ತ್ರೀಯರು, ಮಕ್ಕಳು ಇವರ ಜಿಲ್ಲಾವಾರು ವಿವರ ಒದಗಿಸುವುದು);

ಆ) ನಾಯಿ ಕಡಿತಕ್ಕೆ ಒಳಗಾದವರಿಗೆ ಉಚಿತವಾಗಿ ಸೂಕ್ತ ಚಿಕಿತ್ಸೆಯನ್ನು ನೀಡಲಾಗಿದೆಯೇ; ನಾಯಿ ಕಡಿತದ ಇಂಜೆಕ್ಷನ್ ಔಷಧಿಗಳನ್ನು ಸಾಕಷ್ಟು ಪ್ರಮಾಣದಲ್ಲಿ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, ಜಿಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ದಾಸ್ತಾನು ಇಡಲಾಗಿದೆಯೇ;

ಇ) ಬೀದಿ ನಾಯಿಗಳ ನಿಯಂತ್ರಣಕ್ಕೆ ಕ್ರಮ ತೆಗೆದುಕೊಳ್ಳುವಂತೆ ನಗರಸಭೆ, ಪುರಸಭೆ, ಗ್ರಾಮಪಂಚಾಯಿತಿಗಳಿಗೆ ಆರೋಗ್ಯ ಇಲಾಖೆಯಿಂದ ಸೂಚನೆ ನೀಡಲಾಗಿದೆಯೇ ?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಮಂಡ್ಯ ಜಿಲ್ಲೆಯಲ್ಲಿ ಜನವರಿ 2014 ರಿಂದ ಡಿಸೆಂಬರ್ 2014 ರ ತನಕ ಬೀದಿನಾಯಿಗಳ ಕಡಿತಕ್ಕೆ ಒಳಗಾದವರ ವಿವರ.

ಗಂಡಸರು	ಹೆಂಗಸರು	ಮಕ್ಕಳು	ಒಟ್ಟು
5354	3015	2855	11224

ಮಂಡ್ಯ ಜಿಲ್ಲೆಯಲ್ಲಿ ಜನವರಿ 2015 ರಿಂದ 15-03-2015ರ ವರೆಗೂ ಬೀದಿನಾಯಿಗಳ ಕಡಿತಕ್ಕೆ ಒಳಗಾದವರ ವಿವರ.

ಗಂಡಸರು	ಹೆಂಗಸರು	ಮಕ್ಕಳು	ಒಟ್ಟು
423	255	225	903

ಮಂಡ್ಯ ಜಿಲ್ಲೆಯಲ್ಲಿ ನಾಯಿ ಕಡಿತಕ್ಕೆ ಒಳಗಾಗಿ ಮರಣ ಹೊಂದಿರುವ ಪ್ರಕರಣಗಳು ವರದಿಯಾಗಿರುವುದಿಲ್ಲ.

ಆ) ಹೌದು.

ದಾಸ್ತಾನು ಇದೆ.

ಇ) ಬೀದಿ ನಾಯಿಗಳ ನಿಯಂತ್ರಣಕ್ಕೆ ಕ್ರಮ ತೆಗೆದುಕೊಳ್ಳಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗುತ್ತಿದೆ.

ಪರಿಶಿಷ್ಟ ಪಂಗಡ ಜಾತಿ ದೃಢೀಕರಣ ಪತ್ರ

2660 (2450); ಶ್ರೀ ಚಿಕ್ಕಮಾದು ಎಸ್. (ಹೆಚ್.ಡಿ. ಕೋಟೆ)

ಅ) ಮೈಸೂರು ಜಿಲ್ಲೆಯಲ್ಲಿ ನಾಯಕ ಜನಾಂಗದವರು ಪರಿಶಿಷ್ಟ ಪಂಗಡದ ಜಾತಿ ಧೃಡೀಕರಣ ಪತ್ರ ನೀಡಲು ಸಲ್ಲಿಸಬೇಕಾದ ಅಗತ್ಯ ದಾಖಲಾತಿಗಳು ಯಾವುವು ಸರ್ಕಾರದ ಮಾರ್ಗ ಸೂಚಿಗಳಿಗನುಸಾರ ವಿವರ ಒದಗಿಸುವುದು;

ಆ) ಅಭ್ಯರ್ಥಿ ಶಾಲಾ ದಾಖಲಾತಿಗಳಲ್ಲಿ ನಾಯಕ ಎಂದಿದ್ದು ತಂದೆ ಜಾತಿ ಪರಿವೀರನಾಯಕ ಎಂಬುವರಿಗೆ ಹಾಗೂ ಅಭ್ಯರ್ಥಿ ಶಾಲಾ